# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 50(533) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.02.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಅನುದಾನಿತ ಶಾಲಾ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ 2016ರ ನಂತರ ಇದುವರೆವಿಗೂ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡದಿರುವುದರಿಂದ ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ತುಂಬಾ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ | ಬಂದಿದ್ದಲ್ಲಿ, 2016 ರಿಂದ 2023ರವರೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಯಾವಾಗ ಅನುಮತಿ ನೀಡಲಾಗುವುದು; | ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ ಹಾಗೂ ಇನ್ನಿತರೆ ಕಾರಣಗಳಿಂದ ದಿನಾಂಕ:31.12.2015ರವರೆಗೆ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ ಹಾಗೂ ಇನ್ನಿತರೆ ಕಾರಣಗಳಿಂದ ದಿನಾಂಕ:01.01.2016 ರಿಂದ 31.12.2020ರವರೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ. |
| ಈ | ಸದರಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ಜ್ಯೋತಿ ಸಂಜೀವಿನಿ ಆರೋಗ್ಯ | ಬಂದಿದೆ. |

| | | |
|---|---|---|
| | ವಿಮಾ ಯೋಜನೆ ಸೌಲಭ್ಯ ಇಲ್ಲೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಉ | ಜ್ಯೋತಿ ಸಂಜೀವಿನಿ ಆರೋಗ್ಯ ವಿಮಾ ಯೋಜನೆ ಸೌಲಭ್ಯ ನೀಡುವಲ್ಲಿ ಇರುವ ತೊಂದರೆಗಳೇನು; | ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ, ಅನುದಾನಿತ ಶಾಲಾ-ಕಾಲೇಜುಗಳ ಸಿಬ್ಬಂದಿಗಳು ಆರೋಗ್ಯ ಸಂಜೀವಿನಿ ಯೋಜನೆಯ ನಗದು ರಹಿತ ಚಿಕಿತ್ಸಾ ವ್ಯಾಪ್ತಿಗೆ ಬರುವುದಿಲ್ಲ. |
| ಊ | ಯಾವ ಕಾಲಮಿತಿಯಲ್ಲಿ ಸದರಿ ಸಿಬ್ಬಂದಿಯವರಿಗೂ ಆರೋಗ್ಯ ವಿಮಾ ಯೋಜನೆ ವಿಸ್ತರಿಸಲಾಗುವುದು? | |

ಇಪಿ 44 ಎಸ್ಇಎಸ್ 2024

(ಎಸ್ ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು